ಪತ್ರಿಕಾ ತುಣುಕುಗಳು
PAPER CLIPPINGS

ಇಲಾಖೆ / ವಿಷಯ : DEPARTMENT / SUBJECT:

ಪತ್ರಿಕೆಯ ಹೆಸರು : NAME OF THE NEWS PAPER:

ದಿನಾಂಕ : DATE: 13/11/20

**ಸಂಪುಟ ಸಭೆ** | ಚಿಕ್ಕಮಗಳೂರು, ಹಾಸನದ 197 ಕೆರೆಗಳಿಗೆ ನೀರು | ಬರೋಬ್ಬರಿ 1,281 ಕೋಟಿ ರು. ವೆಚ್ಚದ ನೀರಾವರಿ ಯೋಜನೆ

# ನೀರಾವರಿ ಯೋಜನೆಗಳಿಗೆ ಸಂಪುಟ ಅನುಮೋದನೆ

## ಮೊದಲ ಹಂತದಲ್ಲಿ ₹406.50 ಕೋಟಿ, 2ನೇ ಹಂತಕ್ಕೆ ₹298.60 ಕೋಟಿ, 3ನೇ ಹಂತಕ್ಕೆ ₹476.07 ಕೋಟಿ ವೆಚ್ಚ

• **ಕನ್ನಡಪ್ರಭವಾರ್ತೆ** ಬೆಂಗಳೂರು 13/11/20

ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಯ ವಿವಿಧ ತಾಲೂಕುಗಳ 197 ಕೆರೆಗಳಿಗೆ ನೀರು ತುಂಬಿಸುವ 1,281 ಕೋಟಿ ರು. ವೆಚ್ಚದ ನೀರಾವರಿ ಯೋಜನೆ ಸೇರಿ ಹಲವು ನೀರಾವರಿ ಯೋಜನೆಗಳಿಗೆ ಗುರುವಾರ ನಡೆದ ಸಚಿವ ಸಂಪುಟ ಸಭೆಯಲ್ಲಿ ಒಪ್ಪಿಗೆ ನೀಡಲಾಗಿದೆ.



ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ನೇತೃತ್ವದಲ್ಲಿ ನಡೆದ ಸಚಿವ ಸಂಪುಟ ಸಭೆಯಲ್ಲಿ ಚಿಕ್ಕಮಗಳೂರು ಜಿಲ್ಲೆಯ ಕಡೂರು, ತರೀಕೆರೆ, ಚಿಕ್ಕಮಗಳೂರು ಹಾಗೂ ಹಾಸನ ಜಿಲ್ಲೆಯ ಅರಸೀಕೆರೆ ಸೇರಿದಂತೆ ಒಟ್ಟು 197 ಕೆರೆಗಳಿಗೆ ಭದ್ರಾ ಜಲಾಶಯದಿಂದ ನೀರು ತುಂಬಿಸಲು ಆಡಳಿತಾತ್ಮಕ ಒಪ್ಪಿಗೆ ನೀಡಲಾಗಿದೆ.

ಈ ಬಗ್ಗೆ ಮಾಹಿತಿ ನೀಡಿದ ಕಾನೂನು ಮತ್ತು ಸಂಸದೀಯ ವ್ಯವಹಾರಗಳ ಸಚಿವ ಜೆ.ಸಿ. ಮಾಧುಸ್ವಾಮಿ ಅವರು ಯೋಜನೆಯೂ ಮೂರು ಹಂತಗಳಲ್ಲಿ ಅನುಷ್ಠಾನಗೊಳ್ಳಲಿದೆ. ಮೊದಲ ಹಂತದಲ್ಲಿ 406.50 ಕೋಟಿ ರು., ಎರಡನೇ ಹಂತಕ್ಕೆ 298.60 ಕೋಟಿ ರು., 3ನೇ ಹಂತಕ್ಕೆ 476.07 ಕೋಟಿ ರು. ವೆಚ್ಚವಾಗಲಿದೆ. ಯೋಜನೆಗಾಗಿ ಭದ್ರಾ ಜಲಾಶಯದಿಂದ 1.45 ಟಿಎಂಸಿ ನೀರು ಬಳಸಿಕೊಳ್ಳಲಾಗುವುದು ಎಂದು ಹೇಳಿದರು.

### ಮೈಶುಗರ್ ಹೊರಗುತ್ತಿಗೆಗೆ ಅಸ್ತು

**ಬೆಂಗಳೂರು:** ಪಾಂಡವಪುರ ಸಹಕಾರ ಸಕ್ಕರೆ ಕಾರ್ಖಾನೆ ಬಳಿಕ ಮಂಡ್ಯದ ಮೈಸೂರು ಶುಗರ್ಸ್ (ಮೈಶುಗರ್ಸ್) ಸಕ್ಕರೆ ಕಾರ್ಖಾನೆಯನ್ನೂ ಖಾಸಗಿಯವರಿಗೆ ಹೊರ ಗುತ್ತಿಗೆ ನೀಡಲು ಗುರುವಾರ ನಡೆದ ಸಂಪುಟ ಸಭೆ ಅನುಮೋದನೆ ನೀಡಿದೆ. ಪ್ರತಿ ವರ್ಷ 70 ಕೋಟಿ ರು. ನಷ್ಟ ಅನುಭವಿಸಬೇಕಾಗುತ್ತದೆ ಎಂಬ ಕಾರಣ ನೀಡಿ ಖಾಸಗಿ ಕಂಪನಿಗಳಿಗೆ ಹೊರಗುತ್ತಿಗೆಗೆ ಒಪ್ಪಿಗೆ ನೀಡಲಾಯಿತು.

### ಪರಿಸರ ಸೂಕ್ಷ್ಮವಲಯಕ್ಕೆ ಅಸ್ತು

**ಬೆಂಗಳೂರು:** ರಾಜ್ಯದ ರಾಷ್ಟ್ರೀಯ ಉದ್ಯಾನವನ, ವನ್ಯಜೀವಿ ಧಾಮಗಳ ಸುತ್ತಮುತ್ತಲಿನ ಪ್ರದೇಶವನ್ನು ಪರಿಸರ ಸೂಕ್ಷ್ಮ ವಲಯ ಎಂದು ಘೋಷಿಸುವಂತೆ ಕೇಂದ್ರ ಸರ್ಕಾರಕ್ಕೆ ಸೂಕ್ತ ಪ್ರಸ್ತಾವನೆಯೊಂದಿಗೆ ಶಿಫಾರಸು ಮಾಡಲು ಅರಣ್ಯ ಸಚಿವರ ನೇತೃತ್ವದಲ್ಲಿ ಸಂಪುಟ ಉಪ ಸಮಿತಿ ರಚನೆ ಮಾಡಲು ಒಪ್ಪಿಗೆ ನೀಡಲಾಗಿದೆ.

### ಮಾದನಾಕನಹಳ್ಳಿ ನಗರಸಭೆ: ಮೇಲ್ದರ್ಜೆಗೆ

ಬೆಂಗಳೂರಿನ ಮಾದನಾಯಕನಹಳ್ಳಿ ಹಾಗೂ ಮೈಸೂರಿನ ಹೂಟಗಳ್ಳಿಯನ್ನು ನಗರಸಭೆಗಳಾಗಿ ಮೇಲ್ದರ್ಜೆಗೇರಿಸಲಾಗಿದೆ. ಜೊತೆಗೆ ಸಿಂದಗಿ ಹಾಗೂ ಶಿಗ್ಗಾವಿ ಪುರಸಭೆಯ ವ್ಯಾಪ್ತಿಯನ್ನು ವಿಸ್ತರಿಸಿ ಹೊಸ ಸರ್ವೆ ನಂಬರ್‌ಗಳನ್ನು ಸೇರ್ಪಡೆ ಮಾಡಲು ಸಹ ಅನುಮೋದನೆ ನೀಡಲಾಗಿದೆ. ರಾಯಚೂರಿನ ದೇವದುರ್ಗದಲ್ಲಿ ಕೋರ್ಟ್ ಸಂಕೀರ್ಣ ನಿರ್ಮಾಣಕ್ಕೆ 13.95 ಕೋಟಿ ರು.ಗೆ ಅನುಮೋದನೆ ನೀಡಲಾಗಿದೆ. ಇದೇ ವೇಳೆ ಗ್ರಾಮ ಪಂಚಾಯ್ತಿಗಳನ್ನು ಪಟ್ಟಣ ಪಂಚಾಯ್ತಿಯಾಗಿ ಮೇಲ್ದರ್ಜೆಗೇರಿಸಿ, ಶಿರಾಳಕೊಪ್ಪವನ್ನು ಪುರಸಭೆಯಾಗಿ ಘೋಷಿಸಲಾಗಿದೆ.

### ಖನಿಜ ಅನ್ವೇಷಣೆಗೆ 65 ಕೋಟಿ ರು.

**ಬೆಂಗಳೂರು:** ರಾಜ್ಯದಲ್ಲಿ ಖನಿಜ ನಿಕ್ಷೇಪಗಳ ಅನ್ವೇಷಣೆಗೆ ಕೇಂದ್ರ ಸರ್ಕಾರದ ವತಿಯಿಂದ ನಡೆಯುವ ಶೋಧನೆಗೆ ₹65 ಕೋಟಿ ನೀಡಲು ಸಚಿವ ಸಂಪುಟ ಸಭೆಯಲ್ಲಿ ಅನುಮೋದನೆ ನೀಡಲಾಗಿದೆ. ಕೇಂದ್ರ ಸರ್ಕಾರದ ಸ್ವಾಮ್ಯದ ಕೆಐಒಸಿಎಲ್, ಎಂಇಸಿಎಲ್ ಕಂಪನಿಗಳಿಗೆ 65.23 ಕೋಟಿ ರು. ವೆಚ್ಚದಲ್ಲಿ ಖನಿಜ ಅನ್ವೇಷಣೆಗೆ ಟೆಂಡರ್ ನೀಡಲಾಗಿದ ಎಂದು ಮಾಧುಸ್ವಾಮಿ ತಿಳಿಸಿದರು.